ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು 1 ನೇ ಅಧಿಕ ಜೆಎಂಎಫ್‌ಸಿ ನ್ಯಾಯಾಲಯ
ರಾಣೇಬೆನ್ನೂರು.
ಸಿ.ಸಿ.ಸಂಖ್ಯೆ: 151/2023

ಪಿ ಡಬ್ಲ್ಯೂ: 3
ಸಿ ಡಬ್ಲ್ಯೂ: 6

| | | |
|---|---|---|
| ಸಾಕ್ಷಿಯ ಹೆಸರು | : | ದಾದಾಪೀರ್ |
| ತಂದೆಯ ಹೆಸರು | : | ಚಮನ್ ಸಾಬ್ ಹರಿಹರ |
| ವಯಸ್ಸು | : | 61 |
| ಉದ್ಯೋಗ | : | ನಿವೃತ್ತ ಅಬಕಾರಿ ನಿರೀಕ್ಷಕರು |
| ವಾಸಸ್ಥಳ | : | ಹಾವೇರಿ |

ದಿನಾಂಕ: 15-12-2025 ರಂದು ಸಾಕ್ಷಿಯನ್ನು ಕರೆಯಿಸಿ ಸತ್ಯ ಪ್ರತಿಜ್ಞೆ ಬೋಧಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ. ರವರಿಂದ:**

ನಾನು ದಿನಾಂಕ 28-07-2022 ರಿಂದ ದಿನಾಂಕ 06-02-2024 ರ ವರೆಗೆ ಅಬಕಾರಿ ಉಪನಿರೀಕ್ಷಕರಾಗಿ ಉಪ ಅಧೀಕ್ಷಕರ ಕಚೇರಿ ರಾಣೇಬೆನ್ನೂರಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುತ್ತೇನೆ.

2. ದಿನಾಂಕ 01-06-2023 ರಂದು ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ ಸಾ 1 ರವರಿಂದ ಸ್ವೀಕರಿಸಿ ತನಿಖೆ ಮುಂದುವರೆಸಿರುತ್ತೇನೆ. ಅದೇ ದಿನ ಕೃತ್ಯ ನಡೆದ ಸ್ಥಳಕ್ಕೆ ಬೇಟಿ ನೀಡಿ ಪರೀಶಿಲಿಸಲಾಯಿತು. ದಿನಾಂಕ 02-06-2023 ರಂದು ಚಾ ಸಾ 4 ರವರ ಮೂಲಕ ಜಪ್ತಾದ ಮಧ್ಯವನ್ನು ಎಫ್ ಎಸ್. ಎಲ್ ವರದಿಗೆ ಕಳುಹಿಸಿಕೊಟ್ಟಿರುತ್ತೇನೆ. ದಿನಾಂಕ 22-06-2023 ರಂದು ಚಾ ಸಾ 5 ರವರಿಂದ ವರದಿ ಪಡೆದುಕೊಂಡಿರುತ್ತೇನೆ. ದಿನಾಂಕ 26-06-2023 ರಂದು ಚಾ ಸಾ 4 ರವರ ಹೇಳಿಕೆ ಪಡೆದುಕೊಂಡಿರುತ್ತೇನೆ.

3. ದಿನಾಂಕ 04-07-2023 ರಂದು ಆರೋಪಿಯ ಸ್ವ ಇಚ್ಛಾ ಹೇಳಿಕೆಯನ್ನು ಠಾಣೆಯಲ್ಲಿ ಪಡೆದುಕೊಂಡಿರುತ್ತೇನೆ. ದಿನಾಂಕ 16-07-2023 ರಂದು ತನಿಖೆ ಪೂರ್ಣಗೊಳಿಸಿ ಆರೋಪಿಯ ವಿರುದ್ಧ ಆರೋಪ ಧೃಢಪಟ್ಟ ಕಾರಣ ಘನ ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಯಿತು.

4. ಸಾಕ್ಷಿದಾರರು ದಿನಾಂಕ 02-06-2023 ರ ಪತ್ರ ಮತ್ತು ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಪತ್ರವನ್ನು ನಿಪಿ 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ 5 ಎ ಎಂದು, ಎಫ್ ಎಸ್ ಎಲ್ ವರದಿಯನ್ನು ನಿಪಿ 6 ಎಂದು ಗುರುತಿಸಲಾಯಿತು.

5. ಸಾಕ್ಷಿದಾರರು ಮು.ಮಾ. ಮತ್ತು ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು: ಆರೋಪಿ ಪರ ವಕೀಲರಿಂದ:**

ಪಂಚನಾಮೆ ಮತ್ತು ಪಿರ್ಯಾದಿಯಲ್ಲಿ ಪಂಚರ ಹೆಸರು ಇರಲಿಲ್ಲ ಎಂದರೆ ಸಾಕ್ಷಿಯು ಪಂಚನಾಮೆಯಲ್ಲಿ ಇರುವುದಾಗಿ ನುಡಿಯುತ್ತಾರೆ. ಆರೋಪಿಯು ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆತನ ವಿರುದ್ಧ ಸುಳ್ಳು ದೋಷಾರೋಣಪಾ ಪತ್ರವನ್ನು ಸಲ್ಲಿಸಲಾಗಿದೆ ಎಂದರೆ ಸರಿಯಲ್ಲ. ನಿಪಿ 6 ರ ವರದಿ ಮತ್ತು ಆರೋಪಿಗೂ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ. ಆರೋಪಿಯ ಸ್ವ ಇಚ್ಛಾ ಹೇಳಿಕೆ ಮತ್ತು ಚಾ ಸಾ 4 ರವರ ಹೇಳಿಕೆ ಪಡೆದಿರುವ ವಿಷಯ ಸುಳ್ಳಿನಿಂದ ಕೂಡಿರುತ್ತದೆ ಎಂದರೆ ಸರಿಯಲ್ಲ. ತನಿಖಾ ಕಾಲಕ್ಕೆ ಆರೋಪಿ ಯಾವುದೇ ತಪ್ಪು ಮಾಡಿಲ್ಲ ಎಂದು ಕಂಡು ಬಂದರೂ ಸಹ ಆರೋಪಿಯ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

ತೆ.ನ್ಯಾದಲ್ಲಿ ಬೆ.ಮಾಡಲಾಯಿತು. ನನ್ನ ಸಮಕ್ಷಮ

ಸಹಿ

ಓ ಹೇ ಕೆ ಸರಿ ಇದೆ. ಪ್ರಧಾನ ದಿವಾಣಿ ನ್ಯಾಯಾಧೀಶರು,
ರಾಣೇಬೆನ್ನೂರು.